7. ಶಾಸನ ರಚನೆ

ವಿಧೇಯಕದ ಮಂಡನೆ.

(ಅ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಇತರ ಕಾನೂನಿನ (ತಿದ್ದುಪಡಿ) ವಿಧೇಯಕ, 2002

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಧ್ಯಕ್ಷರೆ, 2002ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2002ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ I

ಅಧ್ಯಕ್ಷರು : ದಯವಿಟ್ಟು ಎಲ್ಲರೂ ತಮ್ಮ ತಮ್ಮ ಜಾಗಗಳಿಗೆ ಹೋಗಿ. ಇವತ್ತು ಮೂರು ಬಿಲ್‌ಗಳನ್ನು ಪಾಸ್ ಮಾಡಿಕೊಡುತ್ತೇವೆ ಎಂದು ಬೆಳಿಗ್ಗೆ ಬಂದು ವಿರೋಧ ಪಕ್ಷದ ನಾಯಕರು ಹೇಳಿದ್ದರು. ಈಗ ಈ ರೀತಿ ಮಾಡುವುದು ಯಾವ ನ್ಯಾಯ ಎಂದು ನೀವೇ ಹೇಳಿ ಹೇಳುವುದೇ ಒಂದು ಇಲ್ಲಿ ಮಾಡುವುದೇ ಒಂದು ಕೃಷ್ಣಪ್ಪನವರೇ, ಈಗ ನಿಮ್ಮ ವಿಧೇಯಕವನ್ನು ಪರ್ಯಾಲೋಚನೆಗಾಗಿ ಮಂಡಿಸಿ.

(ಆ) ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕ, 2002.

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಇಲಾಖಾ ಸಚಿವರು) : ಮಾನ್ಯ ಅಧ್ಯಕ್ಷರೆ, "2002 ರ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಈಗ ಪ್ರಸ್ತಾಪ ಏನೆಂದರೆ;

"2002ರ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು"